# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 182
ಸದಸ್ಯರ ಹೆಸರು : ಶ್ರೀ. ಪ್ರತಾಪ್ ಸಿಂಹ ನಾಯಕ್.ಕೆ.
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು
ಉತ್ತರಿಸಬೇಕಾದ ದಿನಾಂಕ : 12.08.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾಡಿಕೆಗಿಂತ ಅಧಿಕ ಮಳೆಯಾಗಿದ್ದು, ಅಡಿಕೆ ತೋಟಗಳಲ್ಲಿ ಕೊಳೆ ರೋಗ ಕಾಣಿಸಿಕೊಂಡು ವ್ಯಾಪಕವಾಗಿ ಹರಡುತ್ತಿದ್ದು, ಅಡಿಕೆ ಬೆಳೆಗಾರರು ತೀವ್ರ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೊಳೆ ರೋಗ ನಿಯಂತ್ರಿಸಲು ಸರ್ಕಾರ ಯಾವೆಲ್ಲಾ ಮುಂಜಾಗ್ರತಾ ಕ್ರಮಗಳನ್ನು ಇದುವರೆಗೆ ಕೈಗೊಂಡಿದೆ: | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಅಡಕೆ ತೋಟಗಳಿಗೆ ಕೊಳೆ ರೋಗ ಮತ್ತಷ್ಟು ಆವರಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದರ ಜೊತೆಗೆ ಕೊಳೆರೋಗದ ನಿಯಂತ್ರಣಕ್ಕೆ ಪರಿಣಾಮಕಾರಿ ಹಾಗೂ ತುರ್ತು ಕ್ರಮಗಳನ್ನು ಕೂಡಲೇ ಕೈಗೊಂಡು ಸಂಕಷ್ಟದಲ್ಲಿರುವ ಅಡಿಕೆ ಬೆಳೆಗಾರರ ಹಿತರಕ್ಷಣೆಗೆ ಸರ್ಕಾರ ಕೂಡಲೇ ಮುಂದಾಗುವುದೇ? | ಅಡಿಕೆ ಕೊಳೆರೋಗ ನಿಯಂತ್ರಿಸಲು ಇಲಾಖೆಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:<br>1. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಸಸ್ಯ ಸಂರಕ್ಷಣಾ ಔಷಧಿಗಳ ಖರೀದಿಗೆ ರೈತರಿಗೆ ಪ್ರತಿ ಹೆಕ್ಟೇರ್ ಗೆ ರೂ.1,500 ಗಳಂತೆ 2 ಹೆಕ್ಟೇರ್ ವರೆಗೆ ರೂ.3,000 ಗಳ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ರೂ.15.00 ಲಕ್ಷಗಳು ನಿಗಧಿಯಾಗಿದ್ದು, ಈವರೆಗೂ ರೂ. 3.15 ಲಕ್ಷಗಳ ಸಹಾಯಧನವನ್ನು 262 ಫಲಾನುಭವಿಗಳಿಗೆ ಪಾವತಿಸಲಾಗಿರುತ್ತದೆ.<br>2. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಗೆ ಅಡಿಕೆ ಬೆಳೆಯು ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ಸದರಿ ಯೋಜನೆಯಡಿ ನಷ್ಟ ಪರಿಹಾರವನ್ನು ಒದಗಿಸಲಾಗುತ್ತಿದೆ.<br>3. ಅಡಿಕೆ ಬೆಳೆಯ ಕೊಳೆರೋಗದ ಲಕ್ಷಣ ಹಾಗೂ ನಿರ್ವಹಣೆ ಕ್ರಮಗಳ ಕುರಿತು ಇಲಾಖಾ ಅಧಿಕಾರಿಗಳ ವತಿಯಿಂದ ರೈತರ ತಾಕುಗಳಿಗೆ ಭೇಟಿ ನೀಡಿ ನಿರ್ವಹಣೆ ಕ್ರಮಗಳ ಕುರಿತು 32 ತರಬೇತಿ ಹಾಗೂ ಪ್ರತ್ಯಕ್ಷತೆ ಕಾರ್ಯಕ್ರಮಗಳನ್ನು ಕೈಗೊಂಡು 2516 ರೈತರಿಗೆ ಮಾಹಿತಿ ನೀಡಲಾಗಿರುತ್ತದೆ.<br>4. ಹಿಂದಿನ ಸಾಲಿನಲ್ಲಿ ಬೆಳೆ ಹಾನಿಯಾಗಿರುವ ಅಂದಾಜು 79,123.67 ಹೆಕ್ಟೇರ್ ಪ್ರದೇಶಕ್ಕೆ ಪ್ರತಿ ಹೆಕ್ಟೇರ್ ಗೆ NDRF/SDRF ಮಾರ್ಗಸೂಚಿಯನ್ವಯ ರೂ.22,500/-ಗಳಂತೆ ಅಡಿಕೆ ಕೊಳೆ ರೋಗ ಬಾಧಿತ ರೈತರಿಗೆ ಪರಿಹಾರ ಒದಗಿಸಲು ಕೇಂದ್ರ ಸರ್ಕಾರಕ್ಕೆ ರೂ.178.03 ಕೋಟಿಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |

HORTI 344 HGM 2025

(ಎಸ್.ಎಸ್.ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು